## 10. ವಿಡಿಯೋ ಕಾನ್ಫರೆನ್ಸ್ ವಿಚಾರಣೆ ಸಹಾಯವಾಣಿ ಆರಂಭ

ಲಾಕ್‌ಡೌನ್ ಪರಿಣಾಮ ಕೋರ್ಟ್‌ಗಳ ಕಲಾಪ ಸ್ಥಗಿತಗೊಂಡಿರುವುದರಿಂದ ತುರ್ತು ಅರ್ಜಿಗಳನ್ನು ಇ–ಫೈಲಿಂಗ್ ಮೂಲಕ ದಾಖಲಿಸಲು ಮತ್ತು ವಿಡಿಯೋ ಕಾನ್ಫೆರೆನ್ಸ್‌ನಲ್ಲಿ ವಿಚಾರಣೆ ನಡೆಸಲು ಹೈಕೋರ್ಟ್ ಸಹಾಯವಾಣಿ ಆರಂಭಿಸಿದೆ. ಇದರಿಂದ ವಕೀಲರಿಗೆ ಸ್ವಯಂವಾದ ಮಂಡಿಸುವವರಿಗೆ ಮತ್ತು ವ್ಯಾಜ್ಯಕರ್ತರಿಗೆ ಅಗತ್ಯ ಮಾರ್ಗದರ್ಶನ ಸಿಗಲಿದೆ. ಸುಪ್ರೀಂಕೋರ್ಟ್ ಏಪ್ರಿಲ್ 6ರಂದು ಹೊರಡಿಸಿದ ಆದೇಶದ ಮೇರೆಗೆ ಹೈಕೋರ್ಟ್ ಬೆಂಗಳೂರು ಪ್ರಧಾನ ಪೀಠ, ಧಾರವಾಡ ಮತ್ತು ಕಲಬುರ್ಗಿ ಪೀಠಗಳಲ್ಲಿ ಈ ಸಹಾಯವಾಣಿ ಆರಂಭಿಸಲಾಗಿದ್ದು, ಅರ್ಜಿ ಸಲ್ಲಿಸುವವರು ಬೆಂಗಳೂರು ಪ್ರಧಾನ ಪೀಠ 14620, ಧಾರವಾಡ 14621 ಮತ್ತು ಕಲಬುರ್ಗಿ ಪೀಠ 14622 ಸಹಾಯವಾಣಿಗೆ ಕೋರ್ಟ್ ಕಛೇರಿ ಸಮಯದಲ್ಲಿ ಕರೆ ಮಾಡಬಹುದು ಎಂದು ರಿಜಿಸ್ಟ್ರಾರ್ ಜನರಲ್ ರಾಜೇಂದ್ರ ಬಾದಾಮಿಕರ ಪ್ರಕಟಿಸಿದ್ದಾರೆ.

ಆಧಾರ:ಪ್ರಜಾವಾಣಿ, ದಿನಾಂಕ:28.04.2020